ಪ್ರ.ರಾನ ಕಾರ್ಯದರ್ಶಿಯವರ ಕಛೇರಿ.
ಕಂ.ಸಂ : 59198
ದಿ. ಆ : 23/10/08

**ಕರ್ನಾಟಕ ಸರ್ಕಾರ**

ಸಂಖ್ಯೆ: ಲಾ 35 ಹೆಚ್‌ಆರ್‌ಸಿ 2008

ಮುಖ್ಯ ಕಾರ್ಯದರ್ಶಿಯವರ ಕಾರ್ಯಾಲಯ,
ಕೊಠಡಿ ಸಂಖ್ಯೆ: 320, 3ನೇ ಮಹಡಿ, ವಿಧಾನಸೌಧ,
ಬೆಂಗಳೂರು, ದಿನಾಂಕ 22ನೇ ಸೆಪ್ಟೆಂಬರ್, 2008

## ಸುತ್ತೋಲೆ

ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗವು ಮಾನವ ಹಕ್ಕುಗಳ ಉಲ್ಲಂಘನೆಯ ಆಪಾದನೆಗಳ ಕುರಿತಾದ ಅರ್ಜಿ/ಫಿರ್ಯಾದುಗಳಿಗೆ ಸಂಬಂಧಿಸಿದಂತೆ ವಿಚಾರಣೆ ನಡೆಸಿ ವರದಿಯನ್ನು ಸಲ್ಲಿಸುವಂತೆ ಸರ್ಕಾರಿ ಅಧಿಕಾರಿಗಳಿಗೆ ಅಗಿಂದಾಗ್ಗೆ ಸೂಚನೆ ನೀಡುತ್ತಿರುತ್ತದೆ. ಆದರೆ, ಹೆಚ್ಚಿನ ಪ್ರಕರಣಗಳಲ್ಲಿ ಆಯೋಗದ ಸೂಚನೆಯಂತೆ ಅಧಿಕಾರಿಗಳು ತನಿಖೆ ನಡೆಸದೆ, ತಮ್ಮ ಅಧೀನದಲ್ಲಿ ಬರುವ ಅಧಿಕಾರಿಗಳಿಗೆ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಸೂಚಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಇದೇ ರೀತಿ ಪೋಲೀಸ್ ಅಧಿಕಾರಿಗಳ ವಿರುದ್ಧ ಮಾಡಿರುವ ಫಿರ್ಯಾದುಗಳಲ್ಲಿ, ಆಯೋಗವು ನೀಡಿದ ಸೂಚನೆಯನ್ನು ಪಾಲಿಸದೆ, ಆಪಾದಿತ ಅಧಿಕಾರಿಯನ್ನೇ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಸೂಚಿಸಿರುವುದೂ ಸಹ ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಆಪಾದಿತ ಅಧಿಕಾರಿಯೇ ತನಿಖೆ ನಡೆಸಿ ವರದಿ ಸಲ್ಲಿಸುವುದು ಸಮಂಜಸವಲ್ಲ. ಇಂತಹ ಕಾರ್ಯವಿಧಾನದ ಬಗ್ಗೆ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗವು ತೀವ್ರವಾದ ಆಕ್ಷೇಪಣೆಯನ್ನು ವ್ಯಕ್ತಪಡಿಸಿದೆ. ಆಯೋಗದ ಯಾವುದೇ ಅರ್ಜಿ/ಫಿರ್ಯಾದುಗಳ ವಿಷಯದಲ್ಲಿ ಪರಿಣಾಮಕಾರಿ ಹಾಗೂ ನಿಷ್ಪಕ್ಷಪಾತ ವರದಿ ಸಲ್ಲಿಸಬೇಕಾಗುತ್ತದೆ. ಆದುದರಿಂದ ಸಾಧ್ಯವಾಗಬಹುದಾದಷ್ಟು ಆಯೋಗದಿಂದ ಹೆಸರಿಸಲಾದ ಅಧಿಕಾರಿಗಳೇ ತನಿಖೆ ನಡೆಸಿ ವರದಿ ಸಲ್ಲಿಸುವುದು. ವಿಷಯದ ಗಂಭೀರತೆಯನ್ನು ಗಮನದಲ್ಲಿರಿಸಿಕೊಂಡು ಅನಿವಾರ್ಯ ಸಂದರ್ಭಗಳಲ್ಲಿ ಅಥವಾ ಆಡಳಿತಾತ್ಮಕವಾಗಿ ಸಾಧ್ಯವಾಗದ ಸಂದರ್ಭಗಳಲ್ಲಿ ಆಯೋಗದ ಒಪ್ಪಿಗೆ ಪಡೆದು ನಿರ್ದಿಷ್ಟವಾದ ಅಧೀನ ಅಧಿಕಾರಿಗಳಿಗೆ ವಿಚಾರಣೆ ನಡೆಸಲು ಅನುಮತಿ ನೀಡಬಹುದು. ಇಂತಹ ಸಂದರ್ಭಗಳಲ್ಲಿ ಆಯೋಗವು ಹೆಸರಿಸಲಾದ ಅಧಿಕಾರಿ/ಸಂಸ್ಥೆಯ ಮುಖ್ಯಸ್ಥರಷ್ಟೆ ಆಯೋಗಕ್ಕೆ ವರದಿ ಸಲ್ಲಿಸಬೇಕು. ಈ ಅಂಶಗಳನ್ನು ಕುರಿತು ತಮ್ಮ ಅಧೀನದಲ್ಲಿ ಬರುವ ಎಲ್ಲಾ ಇಲಾಖೆಗಳ/ಸಂಸ್ಥೆಗಳ ಮುಖ್ಯಸ್ಥರುಗಳಿಗೆ ಸ್ಪಷ್ಟ ನಿರ್ದೇಶನ ನೀಡುವಂತೆ ಸೂಚಿಸಿದೆ.

XXX

23.10.08

(ಸುಧಾಕರ್ ರಾವ್)
ಸರ್ಕಾರದ ಮುಖ್ಯ ಕಾರ್ಯದರ್ಶಿ

ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು

**ಪ್ರತಿ ಮಾಹಿತಿಗಾಗಿ:-**

ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ, ಬೆಂಗಳೂರು.